ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1448 (1782)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯಸಂಸ್ಥೆಗಳಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ತಾಲ್ಲೂ ಪಂಚಾಯತ್‌ನ್ನು ರದ್ದು ಪಡಿಸಲು ಅಥವಾ ಅಭಿವೃದ್ಧಿ ಪಡಿಸುವ ಬಗ್ಗೆ

(ಅ) ಪಂಚಾಯತ್ ರಾಜ್ ವ್ಯವಸ್ಥೆಯ ಸ್ಥಳೀಯ ಸಂಸ್ಥೆಗಳ ಮೂರು ಹಂತದ ಸ್ವಯಂ ಆಡಳಿತ ವ್ಯವಸ್ಥೆಗಳಲ್ಲಿ ಒಂದಾದ ತಾಲ್ಲೂಕು ಪಂಚಾಯತ್ ವ್ಯವಸ್ಥೆಯನ್ನು ರದ್ದುಪಡಿಸುವ ನಿರ್ಧಾರ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಇದಕ್ಕೆ ಪರ್ಯಾಯವಾಗಿ ಸೂಕ್ತ ಆಡಳಿತ ವ್ಯವಸ್ಥೆಯನ್ನು ಸೃಜಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ತಾಲ್ಲೂಕು ಪಂಚಾಯಿತಿಯನ್ನು ಇನ್ನಷ್ಟು ಸದೃಢಗೊಳಿಸುವ ಮv್ತು ಪ್ರಸ್ತುತ ಆಡಳಿತ ವ್ಯವಸ್ಥೆಯನ್ನು ಅಮೂಲಾಗ್ರವಾಗಿ ಬದಲಾಯಿಸುವ ಯೋಜನೆಯು ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ತಾಲ್ಲೂಕು ಪಂಚಾಯಿತಿ ವ್ಯವಸ್ಥೆಯಲ್ಲಿ ತರಬಯಸುವ ಬದಲಾವಣೆಗಳೇನು; ಯಾವ ಪದ್ಧತಿಯಲ್ಲಿ ಮಧ್ಯಮ ಸ್ಥಳೀಯ ಆಡಳಿತ ವ್ಯವಸ್ಥೆಯನ್ನು ರೂಪಿಸಲಾಗುವುದು ; (ಸಂಪೂರ್ಣ ವಿವರ ಒದಗಿಸುವುದು)

(ಉ) ತಾಲ್ಲೂಕು ಪಂಚಾಯಿತಿಯನ್ನು ರದ್ದುಪಡಿಸುವುದರಿಂದ ಅಥವಾ ವ್ಯವಸ್ಥೆಯಲ್ಲಿ ಸಂಪೂರ್ಣ ಬದಲಾವಣೆ ತರುವುದರಿಂದ ಆಗುವ ಪರಿಣಾಮಗಳು ಮತ್ತು ಪ್ರಯೋಜನಗಳೇನು ? (ವಿವರ ಒದಗಿಸುವುದು)